ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಜಮಖಂಡಿ ತಾಲ್ಲೂಕಿನಲ್ಲಿ 2877 ಎಕರೆ 33 ಗುಂಟೆ ಮತ್ತು ಮುಧೋಳ ತಾಲ್ಲೂಕಿನಲ್ಲಿ 1354 ಎಕರೆ 12 ಗುಂಟೆ ಸರ್ಕಾರಿ ಜಮೀನು ಇರುತ್ತದೆ.

ಆ) ಜಮಖಂಡಿ ತಾಲ್ಲೂಕಿನಲ್ಲಿ 552 ಎಕರೆ 15 ಗುಂಟೆ ಮತ್ತು ಮುಧೋಳ ತಾಲ್ಲೂಕಿನಲ್ಲಿ 136 ಎಕರೆ 33 ಗುಂಟೆ ಜಮೀನನ್ನು ಅಕ್ರಮವಾಗಿ ಸಾಗುವಳಿ ಮತ್ತು ಒತ್ತುವರಿ ಮಾಡಿಕೊಳ್ಳಲಾಗಿದೆ.

ಇ) ಸರ್ಕಾರಿ ಜಮೀನುಗಳ ಒತ್ತುವರಿಯನ್ನು ಪತ್ತೆಹಚ್ಚಿ ತೆರವುಗೊಳಿಸುವ ಕುರಿತು ಕ್ರಮ ಜರುಗಿಸಲಾಗುತ್ತಿದೆ.

83 (125) ಶ್ರೀ ಸಿದ್ದು ಸವದಿ (ತೇರದಾಳ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿ ಮತ್ತು ತೇರದಾಳ ವಿಧಾನ ಸಭಾ ಕ್ಷೇತ್ರಗಳಲ್ಲಿ ಕಳೆದ ಆರು ತಿಂಗಳುಗಳಿಂದ ಬಾಂಡ್ ಪೇಪರ್‌ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸಮಸ್ಯೆಯನ್ನು ನಿವಾರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಹೌದು.

ಆ) ಬಾಂಡ್ ಪೇಪರ್‌ಗಳ ಕೊರತೆಯನ್ನು ನಿವಾರಿಸಲು ಈಗಾಗಲೇ ಕೆಲವು ಉಪ ನೋಂದಣಿ ಕಛೇರಿಗಳಿಗೆ ಉಬ್ಬಚ್ಚು ಯಂತ್ರವನ್ನು ಸರಬರಾಜು ಮಾಡಲಾಗಿದ್ದು, ಈ ಮೂಲಕ ಸಾರ್ವಜನಿಕರು ನೋಂದಣಿಗೆ ಐಚ್ಛಿಕವಾಗಿರುವ ದಸ್ತಾವೇಜುಗಳಿಗೆ ಮುದ್ರಾಂಕ ಶುಲ್ಕವನ್ನು ಉಬ್ಬಚ್ಚು ಮಾಡಿಸುವ ಮೂಲಕ ಉಪಯೋಗವನ್ನು ಪಡೆದುಕೊಳ್ಳಬಹುದಾಗಿದೆ.

ಹಾಗೂ ಉಬ್ಬಚ್ಚು ಯಂತ್ರ ಲಭ್ಯವಿಲ್ಲದೇ ಇರುವ ಉಪ ನೋಂದಣಿ ಕಛೇರಿಗಳಲ್ಲಿ ಕರ್ನಾಟಕ ಮುದ್ರಾಂಕ ಕಾಯ್ದೆ 1957 ರ ಕಲಂ 10ಎ ಪ್ರಕಾರ ದೃಢೀಕರಣ ಮಾಡಿಕೊಡಲು ಎಲ್ಲಾ ಉಪ ನೋಂದಣಾಧಿಕಾರಿಗಳಿಗೆ ನಿರ್ದೇಶನ ನೀಡಿ ಸುತ್ತೋಲೆ ಹೊರಡಿಸಲಾಗಿದೆ.